***ನ್ಯಾಯ ವಿಜ್ಞಾನ ಪ್ರಯೋಗಾಲಯ/ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ ಘಟಕದಲ್ಲಿ ಖಾಲಿಯಿರುವ ಪ್ರಯೋಗಾಲಯ ಸಹಾಯಕರು (ಪೋಟೋಗ್ರಫಿ), ಇ.ಇ.ಜಿ ತಂತ್ರಜ್ಞರು, ಪ್ರಯೋಗಾಲಯ ಸೇವಕರ (ಕಲ್ಯಾಣ-ಕರ್ನಾಟಕೇತರ ಹಾಗೂ ಕಲ್ಯಾಣ-ಕರ್ನಾಟಕ )ಹುದ್ದೆಗಳ ನೇಮಕಾತಿ-2020.***

**ಅಧಿಸೂಚನೆ ಸಂಖ್ಯೆ: 96/ನೇಮಕಾತಿ-2/2020-21**

**ಒಟ್ಟು ಹುದ್ದೆಗಳು: 45.**

ನ್ಯಾಯ ವಿಜ್ಞಾನ ಪ್ರಯೋಗಾಲಯ/ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯ ಘಟಕದಲ್ಲಿ ಖಾಲಿಯಿರುವ ಪ್ರಯೋಗಾಲಯ ಸಹಾಯಕರು (ಪೋಟೋಗ್ರಫಿ), ಇ.ಇ.ಜಿ ತಂತ್ರಜ್ಞರು, ಪ್ರಯೋಗಾಲಯ ಸೇವಕರ(ಕಲ್ಯಾಣ-ಕರ್ನಾಟಕೇತರ ಹಾಗೂ ಕಲ್ಯಾಣ-ಕರ್ನಾಟಕ) ಹುದ್ದೆಗೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಸೂಚನೆಗಳು.

- ಅರ್ಜಿಗಳನ್ನು ಆನ್-ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸಲು ಅವಕಾಶವಿರುತ್ತದೆ.

- ಅರ್ಜಿದಾರರು ಅಧಿಸೂಚನೆಯಲ್ಲಿ ನೀಡಲಾಗಿರುವ ನ್ಯಾಯ ವಿಜ್ಞಾನ ಪ್ರಯೋಗಾಲಯ, ಬೆಂಗಳೂರು ಮತ್ತು ಪ್ರಾದೇಶಿಕ ನ್ಯಾಯ ವಿಜ್ಞಾನ ಪ್ರಯೋಗಾಲಯಗಳಲ್ಲಿ ಖಾಲಿ ಇರುವ ಪ್ರಯೋಗಾಲಯ ಸಹಾಯಕರು (ಪೋಟೋಗ್ರಫಿ), ಇ.ಇ.ಜಿ ತಂತ್ರಜ್ಞರು, ಪ್ರಯೋಗಾಲಯ ಸೇವಕರ(ಕಲ್ಯಾಣ-ಕರ್ನಾಟಕೇತರ ಹಾಗೂ ಕಲ್ಯಾಣ-ಕರ್ನಾಟಕ ) ಹುದ್ದೆಗೆ ಮೀಸಲಾತಿ ವರ್ಗೀಕರಣವನ್ನು ನೋಡಿ ಅರ್ಜಿ ಸಲ್ಲಿಸುವಂತೆ ಅಭ್ಯರ್ಥಿಗಳಿಗೆ ಸೂಚಿಸಲಾಗಿದೆ.

- ಅರ್ಜಿದಾರರು ಹೊಸ ಅರ್ಜಿಯನ್ನು ಸಲ್ಲಿಸುವ ಮೊದಲು ಇಂಟರ್‌ನೆಟ್‌ನಲ್ಲಿ ಹೊಸದಾಗಿ BROWSER ನ್ನು ತರೆದು ಅರ್ಜಿಯನ್ನು ತುಂಬಬೇಕು. ಅರ್ಜಿಯನ್ನು ಪೂರ್ಣಗೊಳಿಸಿದ ನಂತರ ತೆರೆದಿರುವ BROWSERನ್ನು ಮುಕ್ತಾಯಗೊಳಸಬೇಕು. ಉದಾಹರಣೆ: ಇತರರು ತೆರೆದಿರುವ ಅಥವಾ ಅರ್ಜಿಯನ್ನು ಸಲ್ಲಿಸಿ BROWSERನ್ನು ಮುಕ್ತಾಯ ಮಾಡದೆ ಹೋಗಿರುವ BROWSERನಲ್ಲಿ ಅರ್ಜಿದಾರರು ಹೊಸ ಅರ್ಜಿಯನ್ನು ಸಲ್ಲಿಸದಂತೆ ಸೂಚಿಸಲಾಗಿದೆ.

- **ಆನ್-ಲೈನ್ (On-line) ಮುಖಾಂತರ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ವಿಧಾನ :**

ಅರ್ಜಿದಾರ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in or http://rec20.ksp-online.in/ಲಿಂಕ್‌ನಲ್ಲಿ ಹುದ್ದೆಗೆ ಅರ್ಜಿ ಸಲ್ಲಿಸಲು ನೀಡಿರುವ ಲಿಂಕ್‌ನಲ್ಲಿ ಕ್ಲಿಕ್ ಮಾಡಿ ಅಧಿಸೂಚನೆ, ಮಾಹಿತಿ ಸೂಚಿ ಮತ್ತು ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ಅರ್ಜಿಯನ್ನು ಭರ್ತಿ ಮಾಡಬೇಕು. ಅರ್ಜಿದಾರ ಒಂದು ಬಿಳಿ ಹಾಳೆಯ ಮೇಲೆ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರ, ಸಹಿ ಮತ್ತು ಅಧಿಸೂಚನೆಯ ಕ್ರಮ ಸಂಖ್ಯೆ ೮(ಸಿ)ರಲ್ಲಿ ನಮೂದಿಸಲಾಗಿರುವ ಯಾವುದಾದರು ಗುರುತಿನ ಚೀಟಿಯನ್ನು ಪ್ರತ್ಯೇಕವಾಗಿ (Soft Copy - less than 250 KB) ಸ್ಕ್ಯಾನ್ ಮಾಡಿಟ್ಟುಕೊಂಡಿರಬೇಕು. ನಂತರ ಅರ್ಜಿದಾರನ ಹೆಸರು, ಜಾತಿ, ಮೀಸಲಾತಿಗಳ ವಿವರ, ಹುಟ್ಟಿದ ದಿನಾಂಕ ಮತ್ತು ಇತ್ಯಾದಿ ವಿವರಗಳನ್ನು ಭರ್ತಿ ಮಾಡಿ ಕೊನೆಯದಾಗಿ ಸ್ಕ್ಯಾನ್ ಮಾಡಿಟ್ಟುಕೊಂಡಿರುವ ಮಾಜಿಸೈನಿಕನ ಅವಲಂಬಿತ ಪ್ರಮಾಣಪತ್ರ, ಗುರುತಿನ ಚೀಟಿ, ಭಾವಚಿತ್ರ ಮತ್ತು ಸಹಿಯನ್ನು ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡುವುದು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅರ್ಜಿದಾರ ನೀಡಿರುವ ವಿವರಗಳು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿದ್ದಲ್ಲಿ ಮಾತ್ರ ಚಲನ್ ಮುದ್ರಿಸಬಹುದು. ಚಲನ್ ಮುದ್ರಿಸಲು ಜನರೇಟ್ ಚಲನ್ ಬಟನ್ ಮೇಲೆ ಕ್ಲಿಕ್ ಮಾಡಿದಲ್ಲಿ ತ್ರಿಪತಿ (Triplicate) ಬ್ಯಾಂಕ್ ಅಥವಾ ಅಂಚೆಕಛೇರಿ ಚಲನ್ ಸೃಜನೆಯಾಗುತ್ತದೆ. ಆ ಚಲನ್‌ನಲ್ಲಿ ಅರ್ಜಿಯ ಸಂಖ್ಯೆಯೊಂದಿಗೆ, ಆಯ್ಕೆ ಮಾಡಿರುವ ಘಟಕ, ಹುದ್ದೆ ನಿಮ್ಮ ಭಾವಚಿತ್ರ, ಪ್ರವರ್ಗ, ಮೀಸಲಾತಿಗಳ ವಿವರ ಮತ್ತು ಪಾವತಿಸಬೇಕಾಗಿರುವ ನಿಗದಿತ ಶುಲ್ಕಗಳ ವಿವರಗಳು ಇರುತ್ತದೆ. ಆ ಚಲನ್ ಪ್ರತಿಯನ್ನು ಮುದ್ರಿಸಿ/ಪ್ರಿಂಟ್ ಮಾಡಿಕೊಳ್ಳತಕ್ಕದ್ದು.

- ನಂತರ ಅರ್ಜಿದಾರ ಮುದ್ರಿಸಿಕೊಳ್ಳಲಾದ ಚಲನ್‌ನಲ್ಲಿ ನಮೂದಾಗಿರುವ ಶುಲ್ಕವನ್ನು ನಗದು ರೂಪದಲ್ಲಿಯೇ ಅಧಿಕೃತ ಹೆಚ್.ಡಿ.ಎಫ್.ಸಿಅಥವಾ ಅಂಚೆ ಕಛೇರಿ ಶಾಖೆಗಳಲ್ಲಿ ಪಾವತಿಸಬೇಕಾಗಿರುತ್ತದೆ. ಶುಲ್ಕ ಪಾವತಿಸಿದ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದು.

- ಅಭ್ಯರ್ಥಿಯ ಶುಲ್ಕ ಪಾವತಿಸಿದ ಮರುದಿನ ಪುನಃ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ My Application ನ್ನು ಕ್ಲಿಕ್ ಮಾಡಿ, ತಮ್ಮ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕ ನಮೂದಿಸಿದ ನಂತರವೇ ಅರ್ಜಿ ತೆರೆಯುತ್ತದೆ ಹಾಗೂ ಅಭ್ಯರ್ಥಿಯು ಭರ್ತಿ ಮಾಡಿರುವ ಎಲ್ಲಾ ವಿವರಗಳನ್ನು ಒಳಗೊಂಡಂತೆ ಅರ್ಜಿಯು ಸೃಜನೆಯಾಗುತ್ತದೆ, ಭರ್ತಿ ಮಾಡಿದ ಆನ್-ಲೈನ್ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಈ ಅರ್ಜಿ ಸಂಖ್ಯೆಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.

- ಆನ್-ಲೈನ್ ಮುಖಾಂತರ ದಿನಾಂಕ:27/10/2020ರ ರಂದು ಬೆಳಗ್ಗೆ 10-00 ಗಂಟೆಯಿಂದ ದಿನಾಂಕ: 25/11/2020 ರ ಸಂಜೆ 06.00 ಗಂಟೆಯವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಶುಲ್ಕವನ್ನು

ನಗದು ರೂಪದಲ್ಲಿ ಪಾವತಿಸಲು ದಿನಾಂಕ: 27/11/2020 ರಂದು ಕೊನೆಯ ದಿನಾಂಕವಾಗಿರುತ್ತದೆ. ಶುಲ್ಕವನ್ನು ಬ್ಯಾಂಕ್‌ನ ಕಛೇರಿಯ ವೇಳೆಯಲ್ಲಿ ಮಾತ್ರ ಪಾವತಿಸತಕ್ಕದ್ದು. ಒಂದು ದಿನದ ನಂತರ ಅರ್ಜಿಯ ಪ್ರತಿಯನ್ನು ಮುದ್ರಿಸಿಕೊಳ್ಳತಕ್ಕದ್ದು.

- ನೇಮಕಾತಿಗೆ ಸಂಬಂಧಪಟ್ಟ ಎಲ್ಲಾ ಮಾಹಿತಿಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನ ಮುಖಾಂತರ ಪಡೆದುಕೊಳ್ಳಲು ಸೂಚಿಸಲಾಗಿದೆ. ಉದಾಹರಣೆ: ಅರ್ಜಿ ಯಶಸ್ವಿಯಾಗಿರುವ ಕುರಿತು, ಅರ್ಹತಾ ಪಟ್ಟಿ, ಪರೀಕ್ಷೆಯ ಕರೆಪತ್ರ/ಲಿಖಿತ ಪರೀಕ್ಷೆಯ ದಿನಾಂಕ, ಕರೆಪತ್ರಗಳು/ವೈದ್ಯಕೀಯ ಪರೀಕ್ಷೆಯ ದಿನಾಂಕ, ಕರೆಪತ್ರಗಳು ಇತ್ಯಾದಿ,

- ಅರ್ಜಿದಾರರನು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಲು ಗಣಕಯಂತ್ರದಲ್ಲಿ ಅಂತರ್ಜಾಲದ SOFTWARE, Internet Explorer 8 or 9, or Google Chrome or Firefox ಅಳವಡಿಸಿಕೊಂಡಿರಬೇಕು.

- ಗಣಕಯಂತ್ರದ ಪರದೆಯ ಮೇಲೆ ಚಿತ್ತರಿಸಿರುವ ಕನ್ನಡದ ಅಕ್ಷರಗಳು ನುಡಿ ತಂತ್ರಾಂಶವನ್ನು ಬಳಸಿ ಬರೆಯಲಾಗಿದೆ, ಕನ್ನಡ ಅಕ್ಷರಗಳು ಗಣಕಯಂತ್ರದಲ್ಲಿ JUNK CHARACTER ರೂಪದಲ್ಲಿ ಗಣಕಯಂತ್ರದ ಪರದೆಯ ಮೇಲೆ ಮೂಡಿದರೆ, ಅದನ್ನು ಸರಿಪಡಿಸಲು ಗಣಕಯಂತ್ರದಲ್ಲಿ NUDI SOFTWARE ಅಳವಡಿಸಿಕೊಳ್ಳಲು ಸೂಚಿಸಲಾಗಿದೆ.

- **ಅರ್ಜಿ ಸಲ್ಲಿಸಲು ಪ್ರಾರಂಭ ಮತ್ತು ಕೊನೆಯ ದಿನಾಂಕ ಹಾಗೂ ಶುಲ್ಕ ಪಾವತಿಸಲು ಕೊನೆಯ ದಿನಾಂಕ:**

  1. **ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 27/10/2020, ಬೆಳಗ್ಗೆ 10:00 ಗಂಟೆಯಿಂದ.**
  2. **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 25/10/2020, ಸಂಜೆ 06:00 ಗಂಟೆವರೆಗೆ.**
  3. **ಶುಲ್ಕವನ್ನು ಅಧಿಕೃತ ಬ್ಯಾಂಕ್ ಅಥವಾ ಅಂಚೆ ಕಛೇರಿ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 27/11/2020.**

- ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಅರ್ಜಿಯನ್ನು ಸಲ್ಲಿಸುವುದು.

- ಅರ್ಜಿ ಪೂರ್ಣಗೊಳಿಸಿದ ನಂತರ ಚಲನ್ ಮುಖಾಂತರ ಶುಲ್ಕವನ್ನು ಪಾವತಿಸುವಂತೆ ಸೂಚಿಸಲಾಗಿದೆ.

- ಶುಲ್ಕ ಪಾವತಿಸಿದ ಮರುದಿನ/ಎರಡು ದಿನದ ನಂತರ ಅರ್ಜಿಯ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನ ಮುಖಾಂತರ ಪಡೆಯಲು ಸೂಚಿಸಲಾಗಿದೆ.

- ಶುಲ್ಕವನ್ನು ಅಧಿಕೃತ ಹೆಚ್.ಡಿ.ಎಫ್.ಸಿನಲ್ಲಿ ಅಥವಾ ಅಂಚೆ ಕಛೇರಿಗಳಲ್ಲಿ ಮಾತ್ರ ಪಾವತಿಸತಕ್ಕದ್ದು. ಬೇರ್‍ಯಾವುದೇ ಬ್ಯಾಂಕಿನಲ್ಲಿ ಶುಲ್ಕ ಪಾವತಿಸಲು ಅವಕಾಶವಿಲ್ಲ. ಬ್ಯಾಂಕ್ ಹುಂಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಅಥವಾ ಇನ್ಯಾವುದೇ ಸ್ವರೂಪದಲ್ಲಿ ಶುಲ್ಕ ಪಾವತಿಸತಕ್ಕದ್ದಲ್ಲ ಹಾಗೂ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

- ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ಅಥವಾ ಬೇರೆ ಸಮಸ್ಯೆ ಎದುರಾದಲ್ಲಿ ನೇಮಕಾತಿ ಸಮಿತಿಯ ಸಹಾಯವಾಣಿ ಸಂಖ್ಯೆ: 080-22943346 ಗೆ ಕರೆ ಮಾಡಿ ಅಗತ್ಯ ಮಾಹಿತಿಯನ್ನು ಪಡೆದು ಅರ್ಜಿಯನ್ನು ಸಲ್ಲಿಸಬಹುದು.

- ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಗಳಗೂ ಹಿಂದಿರುಗಿಸಲಾಗುವುದಿಲ್ಲ ಮತ್ತು ಅದನ್ನು ನೇಮಕಾತಿ ಸಮಿತಿಯು ನಡೆಸುವ ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

- ಮೀಸಲಾತಿ ಕೋರುವ ಪ್ರಮಾಣ ಪತ್ರಗಳು ಅಧಿಸೂಚನೆಯಲ್ಲಿ ನಮೂದಿಸಿರುವಂತಹ ನಿಯಮಗಳ ನಮೂನೆಯಲ್ಲಿಯೇ ಇರಬೇಕು. ಸದರಿ ಪ್ರಮಾಣ ಪತ್ರಗಳನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

- ಯಾವುದೇ ದಾಖಲೆಗಳನ್ನು ಅಂಚೆ ಮೂಲಕವಾಗಲಿ ಅಥವಾ ಮುದ್ದಾಂ ಆಗಿ ಸಲ್ಲಿಸತಕ್ಕದ್ದಲ್ಲ.

- ಮೀಸಲಾತಿಯನ್ನು ಕೋರ ಬಯಸುವ ಅರ್ಜಿದಾರರುಗಳು ಆನ್‌ಲೈನ್ ಅರ್ಜಿಯಲ್ಲಿ ಮೀಸಲಾತಿ ಸೌಲಭ್ಯಕ್ಕಾಗಿ ಇರುವ ಅಂಕಣವನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು. ಅಂಕಣವನ್ನು ಖಾಲಿ ಬಿಟ್ಟಿದ್ದಲ್ಲಿ ಸಾಮಾನ್ಯ ವರ್ಗ ಎಂದು ಪರಿಗಣಿಸಲಾಗುವುದು. ನಂತರ ಯಾವುದೇ ಹಂತದಲ್ಲಿ ಮೀಸಲಾತಿಯನ್ನು ಸೇರ್ಪಡೆ ಮಾಡಲು ಅವಕಾಶವಿರುವುದಿಲ್ಲ. ಒಂದು ವೇಳೆ ತಪ್ಪಾಗಿ ನಮೂಧಿಸಿದ್ದರೆ, ನಂತರ ತಿದ್ದುಪಡಿಗೆ ಅವಕಾಶವಿರುವುದಿಲ್ಲ ಮತ್ತು ಅಂತಹ ಅರ್ಜಿದಾರರುಗಳನ್ನು ಅರ್ಹತೆ ಹೊಂದಿದಲ್ಲಿ ಸಾಮಾನ್ಯ ವರ್ಗದ ಅಭ್ಯರ್ಥಿಗಳೆಂದು ಪರಿಗಣಿಸಲಾಗುವುದು.

- ಆಯ್ಕೆಯಾಗಿರುವ ಎಲ್ಲಾ ಅರ್ಹ ಅಭ್ಯರ್ಥಿಗಳು ದಾಖಲೆ ಪರಿಶೀಲನೆ ಸಮಯದಲ್ಲಿ ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಮುದ್ರಿತ ಪ್ರತಿಯನ್ನು ಹಾಗೂ ನಿಗದಿತ ಶುಲ್ಕವನ್ನು ಪಾವತಿಸಿರುವ ಚಲನ್‌ನ ಅಭ್ಯರ್ಥಿ ಪ್ರತಿಯನ್ನು ತಪ್ಪದೇ ಹಾಜುರುಪಡಿಸತಕ್ಕದ್ದು. ತಪ್ಪಿದಲ್ಲಿ ದಾಖಲೆ ಪರಿಶೀಲನೆಗೆ ಪರಿಗಣಿಸಲಾಗುವುದಿಲ್ಲ.

- ನಿಗದಿತ ಶುಲ್ಕವನ್ನು ಬ್ಯಾಂಕ್‌ನಲ್ಲಿ ಪಾವತಿಸಿದ ನಂತರ, ಬ್ಯಾಂಕ್ / ಅಂಚೆ ಕಛೇರಿ ಸಿಬ್ಬಂದಿಯವರು ಬ್ರಾಂಚ್‌ಕೋಡ್, ಜರ್ನಲ್ ಸಂಖ್ಯೆ, ಶುಲ್ಕ ಸಂದಾಯವಾದ ದಿನಾಂಕ ಮತ್ತು ಶುಲ್ಕ ಸ್ವೀಕರಿಸಿರುವವರ ಸಹಿಯೊಂದಿಗೆ ಮಾಹಿತಿಯನ್ನು ಸರಿಯಾಗಿ ನಮೂದಿಸಿರುವರೆಂದು ಅರ್ಜಿದಾರರು ಖಾತ್ರಿ ಪಡಿಸಿಕೊಳ್ಳಲು ಸೂಚಿಸಲಾಗಿದೆ.

- ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡಿದ ನಂತರ ನಿಗದಿತ ಶುಲ್ಕ ಪಾವತಿಸಲು ಸೃಜನೆಯಾಗುವ ಬ್ಯಾಂಕ್ ಚಲನ್ ಮತ್ತು ಪೂರ್ಣಗೊಳಿಸಿದ ಅರ್ಜಿಯನ್ನು ಗಣಕಯಂತ್ರದ ಪರದೆಯ ಮೇಲೆ ಛಿತ್ತರಿಸಲು ಗಣಕಯಂತ್ರದಲ್ಲಿ PDF Reader Software ಅಳವಡಿಸಿರಬೇಕು. ಇಲ್ಲದಿದ್ದಲ್ಲಿ PDF Reader Software ಅಳವಡಿಸಿಕೊಳ್ಳಲು ಸೂಚಿಸಲಾಗಿದೆ.

**ಅರ್ಜಿ ಸಲ್ಲಿಸ ಬಯಸುವ ಅರ್ಜಿದಾರರುಗಳು ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಿಂಧುವಾಗಿರುವಂತೆ ಪಡೆದಿಟ್ಟುಕೊಂಡಿರತಕ್ಕದ್ದು :**

- ಶೈಕ್ಷಣಿಕ ವಿದ್ಯಾರ್ಹತೆಯಅಂಕಪಟ್ಟಿ.

**A) ವಿದ್ಯಾರ್ಹತೆ:**

**ಇ.ಇ.ಜಿ ತಂತ್ರಜ್ಞರು**

ವಿಜ್ಞಾನ ಪದವಿ ಹೊಂದಿರಬೇಕು.
ಇ.ಇ.ಜಿ ತಾಂತ್ರಿಕಕೋರ್ಸ್/ಮೆಡಿಕಲ್ ಲ್ಯಾಬ್‌ರೆಟರಿ ಟೆಕ್‌ಕೋರ್ಸ್‌ನಲ್ಲಿ ಡಿಪ್ಲೋಮಾ ಪದವಿ ಪಡೆದಿರಬೇಕು ಅಥವಾ ಯಾವುದೇ ಇತರೆ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

**B) ಪ್ರಯೋಗಾಲಯ ಸಹಾಯಕರು (ಪೋಟೋಗ್ರಫಿ )**

i) ಸಿನಿಮಾಟೋಗ್ರಫಿಯಲ್ಲಿ ಅಥವಾ ಮೋಟೋಗ್ರಫಿಯಲ್ಲಿ ಡಿಪ್ಲೋಮಾ ವಿದ್ಯಾರ್ಹತೆ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಸರ್ಕಾರದಿಂದ ಮಾನ್ಯತೆ ಹೊಂದಿರುವಂತಹ ಸಂಸ್ಥೆಗಳಿಂದ ಹೊಂದಿರತಕ್ಕದ್ದು.

ii)ಕನಿಷ್ಠ ಒಂದು ವರ್ಷ ಪ್ರಾಯೋಗಿಕ ಅನುಭವವನ್ನು ಅನಾಲಾಗ್ ಮತ್ತುಡಿಜಿಟಲ್ ಪೋಟೋಗ್ರಫಿ ಉಪಕರಣಗಳ ನಿರ್ವಹಣೆಯನ್ನು ವಿಡಿಯೋಗ್ರಫಿ ಸಹಿತ ಹೊಂದಿರಬೇಕು.

**C) ಪ್ರಯೋಗಾಲಯ ಸೇವಕರು**

ಪಿಯುಸಿ ಅಥವಾ 10+2 ವಿಜ್ಞಾನ ವಿಷಯದಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು.

4) <u>ಲಿಖಿತ ಪರೀಕ್ಷೆ:</u>

**A)ಇಇಜಿ ತಂತ್ರಜ್ಞರು ಮತು ಪ್ರಯೋಗಾಲಯ ಸಹಾಯಕರ (ಫೋಟೋಗ್ರಫಿ)**

ಅರ್ಹ ಅಭ್ಯರ್ಥಿಗಳಿಗೆ ಎರಡು ಲಿಖಿತ ಪರೀಕ್ಷೆ ನಡೆಸಲಾಗುವುದು.

i) ಪತ್ರಿಕೆ –1:

**ಸಾಮಾನ್ಯ ಪತ್ರಿಕೆ**–ಸಾಮಾನ್ಯಅಧ್ಯಯನ, ಸಾಮಾನ್ಯ ವಿಜ್ಞಾನಕ್ಕೆ ಸಂಭಂದಿಸಿದ ಎಲ್ಲಾವಿಷಾಯಾಧಾರಿತ ಪ್ರಶ್ನೆಗಳನ್ನು ಒಳಗೊಂಡಿರತಕ್ಕದ್ದು– 75 ಅಂಕಗಳಿಗೆ

(75 ಪ್ರಶ್ನೆ, 1 ಪ್ರಶ್ನೆಗೆ, 1 ಅಂಕ )
[ಸಮಯ: 01 ಗಂಟೆ 30 ನಿಮಿಷಗಳು]

ii) ಪತ್ರಿಕೆ–2 ನಿರ್ದಿಷ್ಠ ಪತ್ರಿಕೆ–ವಿಷಯಾಧಾರಿತ ಪ್ರಶ್ನೆ ಪತ್ರಿಕೆಯಾಗಿದ್ದುಆಯಾ ವಿಷಯಗಳಿಗೆ ಸಂಬಂಧಿದ ಪ್ರಶ್ನೆಗಳನ್ನು ಒಳಗೊಂಡಿರತಕ್ಕದ್ದು – 75 ಅಂಕಗಳು

(75 ಪ್ರಶ್ನೆ, 1 ಪ್ರಶ್ನೆಗೆ, 1 ಅಂಕ )
[ ಸಮಯ:01 ಗಂಟೆ 30 ನಿಮಿಷಗಳು]

iii) ಯಾವುದೇ ರೀತಿಯ ಋಣಾತ್ಮಕ ಅಂಕಗಳು ಇರುವುದಿಲ್ಲ.

**B) ಪ್ರಯೋಗಾಲಯ ಸೇವಕರು**

i) ಪತ್ರಿಕೆ– 1

ಸಾಮಾನ್ಯ ಪತ್ರಿಕೆ–ಸಾಮಾನ್ಯಅಧ್ಯಯನ, ಸಾಮಾನ್ಯ ವಿಜ್ಞಾನಕ್ಕೆ ಸಂಬಂಧಿಸಿದ ಎಲ್ಲಾ ವಿಷಾಯಾಧಾರಿತ ಪ್ರಶ್ನೆಗಳನ್ನು ಒಳಗೊಂಡಿರತಕ್ಕದ್ದು– 150 ಅಂಕಗಳಿಗೆ

(100 ಪ್ರಶ್ನೆ, 1 ಪ್ರಶ್ನೆ, 1.5 ಅಂಕ)
[ ಸಮಯ:02 ಗಂಟೆ ]

ii)ಯಾವುದೇ ರೀತಿಯ ಋಣಾತ್ಮಕ ಅಂಕಗಳು ಇರುವುದಿಲ್ಲ.

- ಹುಟ್ಟಿದ ದಿನಾಂಕದ ಪ್ರಮಾಣ ಪತ್ರ.(ಎಸ್.ಎಸ್.ಎಲ್.ಸಿ ಅಂಕಪಟ್ಟಿ)
- ಸರ್ಕಾರಿ ಇಲಾಖೆಯಲ್ಲಿ (ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದ)/ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ /ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾವತಿಯಿಂದ ನೀಡಲಾಗುವ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ / ನಿರಾಪೇಕ್ಷಣ ಪ್ರಮಾಣಪತ್ರ.
- ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಕೋರುವ ಅರ್ಜಿದಾರರುಗಳು ತಹಶೀಲ್ದಾರ್‌ರಿಂದ ಪಡೆದನಮೂನೆ ಡಿ/ಇ/ಎಫ್‌ಪ್ರಮಾಣ ಪತ್ರಗಳು.

- ಯೋಜನಾ ನಿರಾಶ್ರಿತ ಮೀಸಲಾತಿಕೋರುವ ಅರ್ಜಿದಾರರುಗಳು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ.
- ಮಾಜಿಸೈನಿಕ ಮೀಸಲಾತಿಕೋರುವ ಮಾಜಿ ಸೈನಿಕ ಅರ್ಜಿದಾರರುಗಳು ಸೈನ್ಯ ವಿಯೋಜನೆ ಪ್ರಮಾಣಪತ್ರ/ ನಿರಾಪೇಕ್ಷಣಾ ಪ್ರಮಾಣಪತ್ರ ( Discharge Certificate/NOC)
- ಮಾಜಿ ಸೈನಿಕರು ಸೇವೆ ಸಲ್ಲಿಸುವಾಗ ಹತರಾದಅಥವಾ ಶಾಶ್ವತವಾಗಿದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು ಮಾಜಿ ಸೈನಿಕ ಮೀಸಲಾತಿಕೋರಿದ್ದಲ್ಲಿ, ಕರ್ತವ್ಯ ನಿರ್ವಹಿಸುತ್ತಿದ್ದಕೇಂದ್ರ ಸಶಸ್ತ್ರದಳದ ಅಧಿಕಾರಿಗಳಂದ ಅವಲಂಬಿತ ಪ್ರಮಾಣಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪಡೆದ ಪ್ರಮಾಣಪತ್ರ.
- ಗ್ರಾಮೀಣ ಮೀಸಲಾತಿಕೋರುವ ಅರ್ಜಿದಾರರುಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆಗ್ರಾಮೀಣ ಪ್ರದೇಶದಲ್ಲಿ ಸತತವಾಗಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂದಪಟ್ಟ ಪ್ರಮಾಣಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರಶಿಕ್ಷಣಾಧಿಕಾರಿಗಳಂದ ಮೇಲು ರುಜು ಮಾಡಿಸಿರುವ ಪ್ರಮಾಣಪತ್ರ.
- ಕನ್ನಡ ಮಾಧ್ಯಮ ಮೀಸಲಾತಿಕೋರುವ ಅರ್ಜಿದಾರರುಗಳು 1ನೇ ತರಗತಿಯಿಂದ 10ನೇ ತರಗತಿಯ ವರೆಗೆಕನ್ನಡ ಮಾಧ್ಯಮದಲ್ಲಿ ಸತತವಾಗಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂದಪಟ್ಟ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟಕ್ಷೇತ್ರ ಶಿಕ್ಷಣಾಧಿಕಾರಿಗಳಂದ ಮೇಲು ರುಜು ಮಾಡಿಸಿಟ್ಟುಕೊಂಡಿರುವ ಪ್ರಮಾಣಪತ್ರ.
- **ಕಲ್ಯಾಣ-ಕರ್ನಾಟಕ ಪ್ರದೇಶಕ್ಕೊಳಪಡುವ (ಸ್ಥಳೀಯ) ಅಭ್ಯರ್ಥಿಗಳು ಕಲ್ಯಾಣ-ಕರ್ನಾಟಕ ಮೀಸಲಾತಿಯ ಸಲುವಾಗಿ ಪಡೆಯಬೇಕಾಗಿರುವ ಪ್ರಮಾಣ ಪತ್ರ:**

  **ನೇರ ನೇಮಕಾತಿಯಲ್ಲಿ ಸ್ಥಳೀಯ ವ್ಯಕ್ತಿಯೆಂಬ ಮೀಸಲಾತಿಯನ್ನುಕ್ಲೇಮು ಮಾಡುವಅರ್ಜಿದಾರರುಒಂದು ಸ್ವಯಂಘೋಷಿತ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.ಪರಂತುಅರ್ಜಿ ಸಲ್ಲಿಸುವ ದಿನಾಂಕದಂದುಅರ್ಜಿದಾರರು ಸ್ಥಳೀಯ ವ್ಯಕ್ತಿಯೆಂದುಅರ್ಹತೆ ಪಡೆಯುವುದುಕಡ್ಡಾಯವಾಗಿರುತ್ತದೆ.ತಾತ್ಕಾಲಿಕವಾಗಿಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿ ಪರೀಕ್ಷೆಗಳ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದಅರ್ಹತಾ ಪ್ರಮಾಣ ಪತ್ರ (ಅನುಬಂಧ-ಎ) ನೀಡತಕ್ಕದ್ದು. ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದಅಂತಿಮ ದಿನಾಂಕದಂದುಅಭ್ಯರ್ಥಿಯು ಸಾರ್ವಜನಿಕಉದ್ಯೋಗಆದೇಶದಂತೆ ಸ್ಥಳೀಯ ವ್ಯಕ್ತಿಯೆಂದುಅರ್ಹತೆ ಪಡೆದಿರುತ್ತಾನೆಂದುಒಂದು ಅಡಿ ಟಿಪ್ಪಣಿಯನ್ನುದಾಖಲಿಸುವುದು.**

- ಮಾಹಿತಿ ಭರ್ತಿ ಮಾಡುವ ಮುನ್ನ ಬಿಳಿ ಹಾಳೆಯ ಮೇಲೆ ತಮ್ಮಇತ್ತೀಚಿನ ಭಾವಚಿತ್ರ ಮತ್ತು ಸಹಿಯನ್ನು ಪ್ರತ್ಯೇಕವಾಗಿ Scan ಮಾಡಿಕೊಂಡಿರತಕ್ಕದ್ದು.

  ಭಾವಚಿತ್ರ(ಕಲರ್) : 400 X 400 pixel, size =< 250KB

  ಸಹಿ ( ಕಪ್ಪು ಶಾಯಿ) : 400X 100 pixel, size =< 250 KB

  ಗುರುತಿನಚೀಟಿ: 400X 300 pixel, size =< 250 KB

  ಮಾಜಿಸೈನಿಕಅವಲಂಬಿತ ಪ್ರಮಾಣಪತ್ರ( ಸೈನಿಕ್ ಬೋರ್ಡ್‌ನಿಂದ ಪಡೆದ ಪ್ರಮಾಣಪತ್ರ) : 400X 300 pixel, size =< 250 KB gif, jpg, jpeg and pngಫಾರ್ಮ್ಯಾಟ್‌ನಲ್ಲಿರತಕ್ಕದ್ದು.

ಟಿಪ್ಪಣಿ:-ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ನಂತರ ಮಾಡಿಸುವ/ಪಡೆಯುವ ಮೀಸಲಾತಿ ಪ್ರಮಾಣ ಪತ್ರಗಳನ್ನು ಯಾವುದೇ ಹಂತದಲ್ಲಿಗಣನೆಗೆ ತೆಗೆದುಕೊಳ್ಳುವುದಿಲ್ಲ .

**<u>ಸೂಚನೆ:</u>-**

a) ಈ ಮೇಲೆ ನಮೂದಿಸಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯಕೊನೆಯಲ್ಲಿ ನೀಡಲಾಗಿರುತ್ತದೆ.

b) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರಅರ್ಜಿ ಸಲ್ಲಿಸುವುದರಿಂದಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶ ಇರುವುದಿಲ್ಲ, ಆದರೆ ಈ ಮೇಲಿನ ಪ್ರಮಾಣ ಪತ್ರಗಳನ್ನು / ದಾಖಲೆಗಳನ್ನು ಪಡೆದಿರಬೇಕುಇಲ್ಲವೇ ಸಿಂಧುವಾಗಿರಬೇಕು ಹಾಗೂ ನೇಮಕಾತಿ ಸಮಿತಿಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಕೆಳಕಂಡ ಕ್ರಮ ಕೈಗೊಳ್ಳಲಾಗುವುದು.

c) ವಿವಿಧ ಮೀಸಲಾತಿಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ: ಆ ಮೀಸಲಾತಿಯನ್ನುರದ್ದುಪಡಿಸಲಾಗುವುದು, ಹಾಗೆಯೇ ಪ್ರವರ್ಗಕೋರಿಅರ್ಜಿ ಸಲ್ಲಿಸಿ, ಜಾತಿ ಪ್ರಮಾಣ ಪತ್ರವನ್ನು ಹಾಜರು ಪಡಿಸದಿದ್ದಲ್ಲಿ ಆ ಪ್ರವರ್ಗವನ್ನು ರದ್ದುಪಡಿಸಿ ಸಾಮಾನ್ಯಅರ್ಹತೆಯಲ್ಲಿಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ ಸಾಮಾನ್ಯಅರ್ಹತೆಯಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

**<u>ಪ್ರಮುಖವಾದ ಸೂಚನೆಗಳು:</u>**

- ಅರ್ಹಗೊಂಡ ಅಭ್ಯರ್ಥಿಗಳಿಗೆ ಅಂಚೆ ಮುಖಾಂತರ ಕರೆ ಪತ್ರವನ್ನು ರವಾನಿಸಲಾಗುವುದಿಲ್ಲ. ವೆಬ್‌ಸೈಟ್ ಮುಖಾಂತರ ಪಡೆದುಕೊಳ್ಳಲು ಸೂಚಿಸಲಾಗಿದೆ.
- ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿದ ನಂತರಯಾವುದೇ ಹಂತದಲ್ಲೂ ಮಾಹಿತಿಗಳ ಬದಲಾವಣೆಗೆಅವಕಾಶವಿರುವುದಿಲ್ಲ .

- ಒಂದು ವೇಳೆ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿದ ನಂತರ ತಿದ್ದುಪಡಿ ಮಾಡುವ ಅಗತ್ಯತೆ ಕಂಡು ಬಂದಲ್ಲಿ ಹೊಸ ಅರ್ಜಿಯನ್ನು ಶುಲ್ಕ ಪಾವತಿಸಿ ಸಲ್ಲಿಸತಕ್ಕದ್ದು.
- ಆನ್‌ಲೈನ್ ಮೂಲಕ ಅರ್ಜಿಯಲ್ಲಿ ಸಲ್ಲಿಸಿರುವ ಮಾಹಿತಿಗಳನ್ನೇ ಆಧಾರವಾಗಿಟ್ಟು ಕೊಂಡು ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದರಿಂದ ಯಾವುದೇ ಹಂತದಲ್ಲಿ ಅಭ್ಯರ್ಥಿಯು ನೀಡಿದ ಮಾಹಿತಿಯು ಅಪೂರ್ಣ/ಅಸ್ಪಷ್ಟ/ತಪ್ಪು ಎಂದು ಕಂಡು ಬಂದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಸಂಪೂರ್ಣ ಹೊಣೆಗಾರರಾಗಿರುತ್ತಾರೆ.
- ತಪ್ಪುಅಥವಾ ಸುಳ್ಳು ಹೇಳಿಕೆ ನೀಡಿರುವನೆಂದುಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತುಕ್ರಮಕ್ಕೆ ಒಳ ಪಡುವುದಲ್ಲದೇ ನೇಮಕಾತಿ ಸಮಿತಿ ನಡೆಸುವಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.
- ಯಾವುದೇ ಅರ್ಜಿದಾರರು ಕ್ರಿಮಿನಲ್ ಮೊಕದ್ದಮೆಯಲ್ಲಿ ಶಿಕ್ಷೆಗೆ ಗುರಿಯಾಗಿರಬಾರದು. ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿ ಬಿಡುಗಡೆ/ಖುಲಾಸೆಯಾಗಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ತೆಗೆದು ಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ.